# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6ಎ)ಪಿಆರ್/ 28 /22-23

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 7.10.23

## ಕಛೇರಿ ಆದೇಶ

ವಿಷಯ: ಶ್ರೀ ಕೆ. ಎಸ್. ಸ್ವಾಮಿ, ಸಹಾಯಕ ಅಭಿಯಂತರರು ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ಲೋಕೋಪಯೋಗಿ ಇಲಾಖೆಯ ಅಧಿಸೂಚನೆ ಸಂಖ್ಯೆ: ಲೋಇ 283 ಸೇಸಎ 2023, ದಿನಾಂಕ: 30-09-2023
2) ಶ್ರೀ ಕೆ. ಎಸ್. ಸ್ವಾಮಿ, ಸಹಾಯಕ ಅಭಿಯಂತರರು ರವರ ಮನವಿ ದಿ: 30-09-2023
3) ಸಂಖ್ಯೆ: ಬಿ12(6)ಪಿಆರ್/56/23-24, ದಿನಾಂಕ: 05-07-2023ರ ಸುತ್ತೋಲೆ

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಕಾರ್ಯಪಾಲಕ ಅಭಿಯಂತರರು (ಯೋಜನೆ-ದಕ್ಷಿಣ) ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರ ಸೇವೆಯನ್ನು ಉಲ್ಲೇಖ-(1)ರ ಸರ್ಕಾರದ ಲೋಕೋಪಯೋಗಿ ಇಲಾಖೆಯ ಅಧಿಸೂಚನೆಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್, ಲೋಕೋಪಯೋಗಿ ಉಪ ವಿಭಾಗ, ಕೊರಟಗೆರೆ, ತುಮಕೂರು ಜಿಲ್ಲೆ ಇಲ್ಲಿಗೆ ಸ್ಥಳನಿಯುಕ್ತಿಗೊಳಿಸಿ ಆದೇಶಿಸಿದ್ದು, ಈ ಸಂಬಂಧ ಸದರಿ ಅಭಿಯಂತರರು ಉಲ್ಲೇಖ-(2)ರಂತೆ ಮನವಿ ಸಲ್ಲಿಸಿ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಲು ಕೋರಿರುವುದರಿಂದ, ಸದರಿಯವರನ್ನು ಈ ಕೆಳಕಂಡ ಷರತ್ತಿಗೊಳಪಡಿಸಿ ದಿನಾಂಕ: 07-10-2023ರ ಅಪರಾಹ್ನದಿಂದ ಅನ್ವಯವಾಗುವಂತೆ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ ಆದೇಶಿಸಿದೆ.

**ಷರತ್ತುಗಳು :-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ .
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ .
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ , ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ .
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ .
5. ವಾಕಿ ಟಾಕಿ , ಮೊಬೈಲ್ ಫೋನ್ , ಸಿಮ್ ಕಾರ್ಡ್ , ಹೆಲ್ಮಾರ್ಡ್ , ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ .

ಮೇಲ್ಕಂಡ ಆದೇಶದನ್ವಯ ಹಾಗೂ ಮಾನ್ಯ ಮುಖ್ಯ ಆಯುಕ್ತರು ರವರ ಉಲ್ಲೇಖ-(3)ರ ಸುತ್ತೋಲೆಯನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

(ಸಹಿ) 7/10
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
7/10/2023 7/10/23

**ಪ್ರತಿಯನ್ನು:**

- ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
- ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಕಾರ್ಯಾಲಯಕ್ಕೆ ಕಳುಹಿಸಿದೆ.
- ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
- ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ
- ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.
- ಜಂಟಿ ಆಯುಕ್ತರು (ದಕ್ಷಿಣ) ವಲಯ ರವರಿಗೆ ಕಳುಹಿಸಿದೆ.
- ನಿರ್ದೇಶಕರು, ಮಾಹಿತಿ ತಂತ್ರಜ್ಞಾನ / ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸಿದೆ.
- ಕಾ.ಪಾ.ಅ (ಯೋಜನೆ-ದಕ್ಷಿಣ) / ಸ.ಕಾ.ನಿ.ಅ (ಯೋಜನೆ-ದಕ್ಷಿಣ) ವಿಭಾಗ ರವರಿಗೆ ಕಳುಹಿಸಿದೆ.
- ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್, ಲೋಕೋಪಯೋಗಿ ಉಪ ವಿಭಾಗ, ಕೊರಟಗೆರೆ, ತುಮಕೂರು ಜಿಲ್ಲೆ
- ಮುಖ್ಯ ಲೆಕ್ಕಾಧಿಕಾರಿ / ಮುಖ್ಯ ಲೆಕ್ಕ ಪರಿಶೋಧಕರು / ಉ.ನಿ (ಹಣಕಾಸು-ಕೇಂದ್ರ/ದಕ್ಷಿಣ) ರವರಿಗೆ ಕಳುಹಿಸಿದೆ.
- ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.